**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ. ತಳವಾರ ಸಾಬಣ್ಣ ರವರು ನಿಯಮ 330ರ ಮೇರೆಗೆ ಗಮನ ಸೆಳೆದಿರುವ ಸೂಚನೆಗೆ ಉತ್ತರ**

**ವಿಷಯ:**

ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಹಿಂದುಳಿದ ವರ್ಗಗಳ ಮೀಸಲಾತಿ ಕುರಿತಂತೆ ನ್ಯಾಯಮೂರ್ತಿ ಭಕ್ತವತ್ಸಲ ಆಯೋಗದ ಐದು ಶಿಫಾರಸ್ಸುಗಳ ಬದಲು ಸರ್ಕಾರ ಕೇವಲ ಮೂರು ಶಿಫಾರಸ್ಸು ಒಪ್ಪಿಕೊಂಡಿದ್ದು ಮತ್ತು ಇದರಿಂದ ಅತಿ ಹಿಂದುಳಿದ ವರ್ಗಗಳಿಗೆ ಆಗುವ ಅನ್ಯಾಯದ ಕುರಿತು.

**ಉತ್ತರ:**

ಮಾನ್ಯ ಸರ್ವೋಚ್ಛ ನ್ಯಾಯಾಲಯವು ನೀಡಿರುವ ತೀರ್ಪಿನಂತೆ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ಜಸ್ಟೀಸ್ ಡಾ.ಕೆ. ಭಕ್ತವತ್ಸಲ, ನಿವೃತ್ತ ನ್ಯಾಯಮೂರ್ತಿಗಳು ಇವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಲಾಗಿತ್ತು.

ಹಿಂದುಳಿದ ವರ್ಗಗಳಿಗೆ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸೂಕ್ತ ರಾಜಕೀಯ ಪ್ರಾತಿನಿಧ್ಯವನ್ನು ಕಲ್ಪಿಸುವ ಸಂಬಂಧ ರಚಿಸಲಾಗಿದ್ದ ಜಸ್ಟೀಸ್ ಡಾ.ಕೆ. ಭಕ್ತವತ್ಸಲ, ನೇತೃತ್ವದ ಆಯೋಗವು ಸಲ್ಲಿಸಿದ್ದ ವರದಿಯಲ್ಲಿ ಶಿಫಾರಸ್ಸು ಮಾಡಲಾಗಿದ್ದ 05 ಅಂಶಗಳನ್ನು ಪರಿಶೀಲಿಸಿ, ಈ ಕೆಳಕಂಡ 03 ಶಿಫಾರಸ್ಸುಗಳನ್ನು ಸರ್ಕಾರವು ಅಂಗೀಕರಿಸಿ, ಸರ್ಕಾರದ ಆದೇಶ ಸಂಖ್ಯೆ: ಹಿಂವಕ 114 ಬಿಸಿಎ 2022(ಭಾಗ-1), ದಿನಾಂಕ:04-11-2023 ಅನ್ನು ಹೊರಡಿಸಿ, ಸದರಿ ಶಿಫಾರಸ್ಸುಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಗಳು ಅನುಷ್ಠಾನಗೊಳಿಸಲು ಅಗತ್ಯ ಕ್ರಮ ವಹಿಸುವಂತೆ ಆದೇಶಿಸಲಾಗಿರುತ್ತದೆ.

i) To continue to provide the policy of Political Reservation of 1/3rd (33%) of total seats, in the ensuing Urban and Local Bodies Elections, in favour of OBCs, as per the present classification of OBCs as "Backward Classes" Category-A and B and the aggregate of reservation of seats in favour of scheduled castes, scheduled tribes and Backward Classes shall not exceed 50% of total seats;

ii) To consider providing reservation of office of the Mayor and the Deputy Mayor in BBMP in favour of persons belonging to Other Backward Classes;

iii) To bring all Urban and Local Bodies Election wing under the control of DPAR;

ಜಸ್ಟೀಸ್ ಡಾ.ಕೆ. ಭಕ್ತವತ್ಸಲ ರವರ ನೇತೃತ್ವದ ಆಯೋಗವು ಸರ್ಕಾರಕ್ಕೆ ಸಲ್ಲಿಸಲಾಗಿದ್ದ 05 ಶಿಫಾರಸ್ಸುಗಳ ಪೈಕಿ 03 ಶಿಫಾರಸ್ಸುಗಳನ್ನು ಮಾತ್ರ ಒಪ್ಪಿರುವುದರಿಂದ, ರಾಜಕೀಯ ಮೀಸಲಾತಿಗೆ ಸಂಬಂಧಿಸಿದಂತೆ ಹಿಂದುಳಿದ ವರ್ಗಗಳಿಗೆ ಯಾವುದೇ ತೊಂದರೆಯುಂಟಾಗಿರುವ ಅಂಶವು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಹಿಂದುಳಿದ ವರ್ಗಗಳಿಗೆ ರಾಜಕೀಯ ಮೀಸಲಾತಿಯಲ್ಲಿ ಸಾಮಾಜಿಕ ನ್ಯಾಯವನ್ನು ಒದಗಿಸಲು ಸರ್ಕಾರವು ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಂಡಿರುತ್ತದೆ.

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.